ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(5)ಬಡ್ತಿ-20/2020-21 ದಿನಾಂಕ : 12-01-2021

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿದ್ದು ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ :- 1. ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದಿ: 29-01-2008.
2 ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡಾವಳಿಗಳು.
3. ದಿನಾಂಕ: 12-01-2021 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಬೆರಳಚ್ಚುಗಾರರು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಶೀಘ್ರಲಿಪಿಗಾರರ ವೃಂದಕ್ಕೆ ಉಲ್ಲೇಖಿತ-1 ರ ಸರ್ಕಾರದ ಆದೇಶದಂತೆ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರ ಹುದ್ದೆಗೆ ಬಡ್ತಿಯನ್ನು ನೀಡಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರನ್ನು ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಬೆರಳಚ್ಚುಗಾರರು ವೃಂದದ ಜೇಷ್ಟತಾ ಪಟ್ಟಿಗಳನ್ನು ಹೊರಡಿಸಲಾಗಿದೆ.

ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಶೀಘ್ರಲಿಪಿಗಾರರ ಹುದ್ದೆಗಳಡಿಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಬೆರಳಚ್ಚುಗಾರರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ: 02-01-2021 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿಯ ಸಭೆಯಲ್ಲಿ ಬಡ್ತಿಗಾಗಿ ಅರ್ಹರೆಂದು ಪರಿಗಣಿಸಿರುವ ಬೆರಳಚ್ಚುಗಾರರಿಗೆ ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ: 12-01-2021ರಂದು ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ಆಯ್ಕೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲಾಗಿದ್ದು, ಅರ್ಹ ನೌಕರರು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಸಂಬಂಧ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಆದೇಶ :-**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಬೆರಳಚ್ಚುಗಾರರುಗಳಿಗೆ ಗ್ರೂಪ್ 'ಸಿ' ವೃಂದದ ರೂ. 27650-52650 ರ ವೇತನ ಶ್ರೇಣಿಯಲ್ಲಿ ಶೀಘ್ರಲಿಪಿಗಾರ ಹುದ್ದೆಗೆ ಸ್ಥಾನಪನ್ನ ಬಡ್ತಿ ಹೊಂದಿದ್ದು, ಸದರಿ ನೌಕರರುಗಳು ದಿನಾಂಕ: 12-01-2021 ರಂದು ನಡೆದ ಕೌನ್ಸಿಲಿಂಗ್‌ನಲ್ಲಿ ಸ್ವ ಇಚ್ಛೆಯಿಂದ ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಬೆರಳಚ್ಚುಗಾರರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿಯ ವಿಳಾಸ |
|---|---|---|
| 1 | ಮಮತಾ ಬಿ.ಪಿ<br>ಆಯುಕ್ತರ ಕಛೇರಿ,<br>ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಆಯುಕ್ತರ ಕಛೇರಿ<br>ಸಾರ್ವಜನಿಕ ಶಿಕ್ಷಣ ಇಲಾಖೆ,<br>ನೃಪತುಂಗ ರಸ್ತೆ, ಬೆಂಗಳೂರು |
| 2 | ಹನುಮಂತಪ್ಪ ಬಾಳಪ್ಪ ಹಿರೇಗೌಂಡ,<br>ಉಪನಿರ್ದೇಶಕರ ಕಛೇರಿ,<br>ಸಾರ್ವಜನಿಕ ಶಿಕ್ಷಣ ಇಲಾಖೆ,<br>ಬೆಂಗಳೂರು ಉತ್ತರ ಜಿಲ್ಲೆ. | ಆಯುಕ್ತರ ಕಛೇರಿ<br>ಸಾರ್ವಜನಿಕ ಶಿಕ್ಷಣ ಇಲಾಖೆ,<br>ನೃಪತುಂಗ ರಸ್ತೆ, ಬೆಂಗಳೂರು |

**ಷರತ್ತುಗಳು**

*01.* ಮೇಲ್ಕಂಡ ಬೆರಳಚ್ಚುಗಾರರು ಶೀಘ್ರಲಿಪಿಗಾರರ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಶೀಘ್ರಲಿಪಿಗಾರರ ಹುದ್ದೆಯಲ್ಲಿ ಕ.ನಾ.ಸೇ.ನಿಯಮ 42[ಬಿ] ಅನ್ವಯ ವೇತನ ನಿಗಧಿಗೆ ಅರ್ಹರಿರುತ್ತಾರೆ.

*02.* ಈ ನೌಕರರ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಅಲ್ಲದೆ ಸರ್ಕಾರಿ ನೌಕರನ ವಿರುದ್ಧ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ಪ್ರಾರಂಭವಾಗಿ ಅಂತಹ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ದಂಡನೆಯಲ್ಲಿ ಪರ್ಯಾವಸಾನಗೊಂಡಿದ್ದಲ್ಲಿ, ಆ ದಂಡನೆಯು ಜಾರಿಯಲ್ಲಿರುವ ಅವಧಿಯಲ್ಲಿ ಅಂತಹ ಸರ್ಕಾರಿ ನೌಕರರಿಗೆ ಮುಂಬಡ್ತಿ ಹೊಂದಲು ಆಸ್ಪದವಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ ಬೆರಳಚ್ಚುಗಾರರ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ, ಇದನ್ನು ಖಚಿತಪಡಿಸಿಕೊಳ್ಳುವುದು.

*03.* ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ವತ: ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ, ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.

*04.* ಈ ಆದೇಶ ಹೊರಡಿಸಿದ 7 ದಿನದೊಳಗೆ ಕರ್ತವ್ಯದಿಂದ ಬಿಡುಗಡೆ ಹೊಂದಿ/ ಸೇರ್ಪಡೆಗೊಳ್ಳುವುದು.

*05.* ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ನೌಕರರನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

*06.* ನೌಕರರು ಸ್ಥಳನಿಯುಕ್ತಿಯನ್ನು ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಪಡೆದಿರುವುದರಿಂದ ಯಾವುದೇ ಪ್ರಯಾಣ ಭತ್ಯೆ, ವರ್ಗಾವಣೆ ಭತ್ಯೆ ಅಥವಾ ಸೇರಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

*07.* ಈ ಎಲ್ಲಾ ಅಂಶಗಳನ್ನು ಕಛೇರಿ ಮುಖ್ಯಸ್ಥರು ಪರಿಶೀಲಿಸಿ ಸ್ಥಾನಾಪನ್ನ ಬಡ್ತಿ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದಿಸಲು ಕ್ರಮ ವಹಿಸಿ ಈ ಕಛೇರಿಗೆ ವರದಿ ಮಾಡತಕ್ಕದ್ದು.

*08.* ನೌಕರರ ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೆ ಈ ಕಛೇರಿಗೆ ವರದಿ ಸಲ್ಲಿಸುವುದು.

*09.* ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ನೌಕರರುಗಳನ್ನು ಸ್ಥಾನಾಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

**(ಸಿರಿಯಣ್ಣವರ್ ಲಲಿತಾ ಚಂದ್ರಶೇಖರ್)**
**ನಿರ್ದೇಶಕರು(ಆಡಳಿತ)(ಹೆ.ಪ್ರ)**

ರವರಿಗೆ

*01.* ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
**02.** ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ
*03.* ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ
*04.* ಸಹಾಯಕ ನಿರ್ದೇಶಕರು (ಕೇಂದ್ರ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
*05.* ಸಂಬಂಧಿಸಿದ ನೌಕರರುಗಳಿಗೆ.
*06.* ಕಛೇರಿ ಪ್ರತಿ.